ಕರ್ನಾಟಕ ಸರ್ಕಾರ

ಸಂ.ಡಿಟಿಇ/500/ಎಸಿಎಂ(2)2015-16

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ:19-05-2016.

## ಅಧಿಸೂಚನೆ
## 2016-17ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶ

-0000000-

ಸರ್ಕಾರದ ಆದೇಶ ಸಂಖ್ಯೆ: ಇಡಿ 59 ಟಿಪಿಇ 2016, ದಿ; 26-04-2016ರ ಅನ್ವಯ ಹಾಗೂ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂ. ಡಿಟಿಇ/500/ಎಸಿಎಂ(2)/2015-16, ದಿನಾಂಕ:18-05-2015ರ ಪತ್ರದ ಅನ್ವಯ 2016-17ನೇ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಮೊದಲನೇ ವರ್ಷದ ಡಿಪ್ಲೋಮಾ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

(ಅ) **ಅರ್ಜಿ ಪಡೆಯುವ ವಿಧಾನ:**

ಪ್ರಥಮ ಡಿಪ್ಲೋಮಾ ಪ್ರವೇಶ ಬಯಸುವ ಅಭ್ಯರ್ಥಿಗಳು **ದಿನಾಂಕ:05-05-2016** ರಿಂದ **30-05-2016** ರವರೆಗೆ ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳ ಮೂಲಕ www.dte.kar.nic.in & www.kea.kar.nic.in **ಡೌನ್‌ಲೋಡ್** ಮಾಡಿಕೊಂಡು ಅರ್ಜಿಯನ್ನು ಮಾಹಿತಿ ಪುಸ್ತಕದಲ್ಲಿರುವ ಸೂಚನೆಗಳನ್ವಯ ಸಂಪೂರ್ಣ ಭರ್ತಿ ಮಾಡುವುದು.

ರಾಜ್ಯದ ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನ ಯಾವುದೇ ಶಾಖೆಯಲ್ಲಿ 'ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು" ಇವರ ಚಾಲ್ತಿ ಖಾತೆ 'ED-KEA-DCET-2016 Application Fee Collection Account No. 64097386381' ಅಥವಾ ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ ನ ಯಾವುದೇ ಶಾಖೆಯಲ್ಲಿ ಚಾಲ್ತಿ ಖಾತೆ 'ED-KEA-DCET-2016 Application Fee Collection Account No. 62417732180' ಗೆ ಪಾವತಿಸಿ BANK CHALLEN (counterfoil) ನ್ನು ಪಡೆದು ಸಮೀಪದ 123 ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ "ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ /ಆಪ್ಷನ್ ಎಂಟ್ರಿ ಸಹಾಯ ಕೇಂದ್ರ"ದಲ್ಲಿ ಸಲ್ಲಿಸಿ ಸ್ವತಃ ಭರ್ತಿ ಮಾಡಿದ ಅರ್ಜಿಯಲ್ಲಿನ ಮಾಹಿತಿಯನ್ನು ಎಲ್ಲಾ ಮೂಲ ದಾಖಲೆಗಳ ಪರಿಶೀಲನೆ ನಂತರ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಆಪ್ಷನ್ ಎಂಟ್ರಿಗಳನ್ನು ಸಹ ಆನ್‌ಲೈನ್‌ನಲ್ಲಿ ದಾಖಲಿಸಿಕೊಳ್ಳಬಹುದು.

(ಆ) **ಅರ್ಜಿ ನೊಂದಣಿ ಶುಲ್ಕ:**

ರೂ. 100/- (ಸಾಮಾನ್ಯ, 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ)
ರೂ. 50/- (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ-1ರ ಅಭ್ಯರ್ಥಿಗಳಿಗೆ)

(ಇ) **ಅರ್ಜಿ ಸಲ್ಲಿಸುವ ವಿಧಾನ:**

ಭರ್ತಿ ಮಾಡಿದ ಅರ್ಜಿಗಳನ್ನು ಸಮೀಪದ ಸಹಾಯ ಕೇಂದ್ರಕ್ಕೆ ದಿನಾಂಕ: 30-05-2016 ರ ಒಳಗಾಗಿ ಎಲ್ಲಾ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ದೃಢೀಕೃತ ಜೆರಾಕ್ಸ್ ಪ್ರತಿಗಳ ಸಹಿತ ಹಾಗೂ ಇತ್ತೀಚಿನ 03 ಪಾಸ್ ಪೋರ್ಟ್ ಸೈಜಿನ ಫೋಟೋಗಳೊಂದಿಗೆ ಸಲ್ಲಿಸಬಹುದಾಗಿದೆ.

(ಈ) **ಸೀಟು ಹಂಚಿಕೆ ವಿಧಾನ:** ನಾನ್ ಇಂಟರಾಕ್ಟೀವ್ ಕೌನ್ಸಿಲಿಂಗ್ (ಆನ್‌ಲೈನ್ ಆಪ್ಷನ್ ಎಂಟ್ರಿ):

ಸಹಾಯಕ ಕೇಂದ್ರಗಳಲ್ಲಿ ಅಭ್ಯರ್ಥಿಗಳು ಸಲ್ಲಿಸುವ ಮೂಲ ದಾಖಲೆಗಳನ್ನು ಪರಿಶೀಲನೆ ಮಾಡಿದ ನಂತರ ಅರ್ಹ ಅಭ್ಯರ್ಥಿಗಳಿಗೆ ಇಚ್ಛೆ / ಆಯ್ಕೆ ದಾಖಲಿಸಲು ಅವಕಾಶ ಕಲ್ಪಿಸಲಾಗುವುದು. ಅರ್ಹ ಅಭ್ಯರ್ಥಿಗಳು ದಾಖಲಿಸುವ ಇಚ್ಛೆ / ಆಯ್ಕೆಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ಹಂಚಿಕೆ ಮಾಡಲಾಗುವುದು.

ಅರ್ಜಿ ಸಲ್ಲಿಸುವ ವಿಧಾನ, ದಾಖಲೆ ಪರಿಶೀಲನೆ ಮತ್ತು ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಸಂಪೂರ್ಣ ಮಾಹಿತಿಗಳನ್ನು ಬ್ರೋಚರ್‌ನಲ್ಲಿ ನೀಡಲಾಗಿದೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ www.dte.kar.nic.in & www.kea.kar.nic.in ವೆಬ್‌ಸೈಟ್‌ಗಳಲ್ಲಿಯೂ ಪ್ರಚುರಪಡಿಸಲಾಗಿದೆ. ಕಾಲಕಾಲಕ್ಕೆ ಮಾಹಿತಿಗಾಗಿ ವೆಬ್‌ಸೈಟ್‌ಗಳನ್ನು ನೋಡುವುದು ಕಡ್ಡಾಯವಾಗಿದೆ.

**ಸಂಜೆ ಡಿಪ್ಲೋಮಾ ಕೋರ್ಸುಗಳ ಪ್ರವೇಶ:**

ಮೇಲೆ ವಿವರಿಸಿದಂತೆ ಅಭ್ಯರ್ಥಿಗಳು ಶುಲ್ಕವನ್ನು ಪಾವತಿಸಿ, ಬ್ಯಾಂಕ್ ಚಲನ್ ಅನ್ನು ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಎಸ್.ಜೆ.ಪಿ ಆವರಣ, ಬೆಂಗಳೂರು ಇಲ್ಲಿ ದಿನಾಂಕ:05-05-2016 ರಿಂದ 30-05-2016 ರವರೆಗೆ ಪಡೆಯಬಹುದಾಗಿದೆ ಹಾಗೂ ದಿನಾಂಕ:30-05-2016 ರ ಒಳಗಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ www.dte.kar.nic.in ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ www.kea.kar.nic.in ಅನ್ನು ನೋಡಲು ಕೋರಿದೆ.

ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

19/05

File 500-15 (Dip_Online_Adm)